## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಹೆಚ್. ಗೋಪಾಲ್ ಕೃಷ್ಣ ರವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ ಕಂಪನಿಗೆ ವರ್ಗಾಯಿಸಿ ಸದರಿ ಸಾಮರ್ಥ್ಯವನ್ನು 49.3 ಮೆ.ವ್ಯಾ. ಹೆಚ್ಚಿಸುವ ಕುರಿತು.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 229 ಎನ್‌ಸಿಇ 2007 ದಿನಾಂಕ: 02.01.2008.

2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ. ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: KRED/08/UGPBPL-20 MW to 49.3 MW (H.G-20 MW)/2014/5329 ದಿನಾಂಕ: 17.12.2014.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಶ್ರೀ ಹೆಚ್. ಗೋಪಾಲ್ ಕೃಷ್ಣ ಇವರಿಗೆ ಬೆಳಗಾವಿ ಜಿಲ್ಲೆಯ ತೆಲಗಿನ ಹಟ್ಟಿ, ಘರ್ ಮತ್ತು ಹೊಸಕೋಟಿ ಗ್ರಾಮಗಳಲ್ಲಿ 20.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಶ್ರೀ ಹೆಚ್. ಗೋಪಾಲ್ ಕೃಷ್ಣ ಇವರಿಗೆ ಬೆಳಗಾವಿ ಜಿಲ್ಲೆಯ ತೆಲಗಿನ ಹಟ್ಟಿ, ಘರ್ ಮತ್ತು ಹೊಸಕೋಟಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ ಕಂಪನಿಗೆ ವರ್ಗಾಯಿಸಿ, ಸದರಿ ಯೋಜನೆಯನ್ನು ಸಾಮರ್ಥ್ಯವನ್ನು 49.3 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ಪಿಪಿಎ ಮಾಡಿಕೊಳ್ಳುವ ಹಾಗೂ ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ ಪರಿಗಣಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ. ಅಲ್ಲದೆ ವರ್ಗಾವಣೆ ಹಾಗೂ ಸಾಮರ್ಥ್ಯ ಹೆಚ್ಚಳ ಶುಲ್ಕವನ್ನು ಅಭಿವೃದ್ಧಿದಾರರಿಂದ ಪಾವತಿಸಿಕೊಂಡಿರುವುದಾಗಿ ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಶ್ರೀ ಹೆಚ್. ಗೋಪಾಲ್ ಕೃಷ್ಣ ಇವರಿಗೆ ಬೆಳಗಾವಿ ಜಿಲ್ಲೆಯ ತೆಲಗಿನ ಹಟ್ಟಿ, ಘರ್ ಮತ್ತು ಹೊಸಕೋಟಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಕ್ಕೆ ನಿಯಮಾನುಸಾರ ನಿಗದಿಪಡಿಸಿರುವ ಅವಧಿಯು ದಿನಾಂಕ: 01.01.2014 ಕ್ಕೆ ಮುಕ್ತಾಯಗೊಂಡಿದ್ದು, ನಿಗದಿತ ಕಾಲಾವಕಾಶ ಶುಲ್ಕ ಪಾವತಿಸುವ ಷರತ್ತಿನೊಂದಿಗೆ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 263 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ: 01.4.2015.**

ಶ್ರೀ ಹೆಚ್. ಗೋಪಾಲ್ ಕೃಷ್ಣ ರವರಿಗೆ ಬೆಳಗಾವಿ ಜಿಲ್ಲೆಯ ತೆಲಗಿನಹಟ್ಟಿ, ಘರ್ ಮತ್ತು ಹೊಸಕೋಟಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ:ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ., ಕಂಪನಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 49.3 ಮೆ.ವ್ಯಾ.ಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

---2)

| Nearby Villages of the proposed area and district | Geographical areas description of the project | Sanctioned/Transfer capacity in MW | Enhancement proposed in MW | Total capacity (No.of WTGs & rating in kW |
|---|---|---|---|---|
| Telaginahatti, Garr, Hoskoti, Belgaum District. | The identified area situated in the reserve forest and covered in 3 toposheets. Further, it is a open mixed jungle and has eastwest and northeast, southwest orientations. It has 5 Peaks and covered in the following Geographical co-ordinates:<br>Latitude: 15°58′18″ - 16°4′33″N<br>Longitude: 74°44′9″ - 74°45′46″ E<br>Ridge peaks: 733, 735, 738, 744 & 744 m Amsl | 20 MW | 29.3 MW | 49.3 MW (29 x 1.7 MW) |

1 ಮೆ:ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ., ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಮೆ:ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ., ರವರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ಪಿಪಿಎ ಮಾಡಿಕೊಳ್ಳಲು ಅಥವಾ ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.

3 ಮೆ:ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ., ರವರು 20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಅನುಷ್ಠಾನಕ್ಕೆ ನಿಯಮಾನುಸಾರ ದಿನಾಂಕ: 02.01.2014 ರಿಂದ 01.01.2017 ರವರೆಗೆ ಕಾಲಾವಕಾಶ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

4 ಮೆ:ಯುನೈಟೆಡ್ ಗ್ರೀನ್ ಪವರ್ ಬೆಳಗಾಂ ಪ್ರೈ.ಲಿ., ರವರು ಯೋಜನೆಯನ್ನು ದಿನಾಂಕ: 01.01.2017 ರೊಳಗೆ ಅನುಷ್ಠಾನಗೊಳಿಸತಕ್ಕದ್ದು.

5 ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☏ 22034674.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.

2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.

8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ

9 M/s H. Gopal Krishna, No 6, Opp HIG House, No. 233, Dollars Colony, 1st Main, RMV 2nd Stage, Bangalore-560094.

10 M/s United Green Power Belgaum Private Limited, No. 6, Maruthi Layout, RMV, SY 24/3, NS Halli, Sanjay Nagar, Bangalore-560 094.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.